511(820) ಶ್ರೀ ರೇಣುಕಾಚಾರ್ಯ ಎಂ.ಪಿ (ಹೊನ್ನಾಳಿ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಹೊನ್ನಾಳಿ ತಾಲ್ಲೂಕಿನಲ್ಲಿ ರೈತ ಸಂಜೀವಿನಿ ವಿಮಾ ಯೋಜನೆಯಡಿ ಎಷ್ಟು ಜನ ರೈತರಿಗೆ ಈವರೆಗೂ ಹಣ ಬಿಡುಗಡೆ ಮಾಡಲಾಗಿದೆ (ಗ್ರಾಮವಾರು ಫಲಾನುಭವಿ ರೈತರ ಮಾಹಿತಿ ನೀಡುವುದು)

ಆ) ಹಣ ಬಿಡುಗಡೆ ಕೋರಿ ಸಲ್ಲಿಸಲ್ಪಟ್ಟ ಹಾಗೂ ಇನ್ನೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು?

ಇ) ಇವರಿಗೆ ಹಣ ಬಿಡುಗಡೆ ಯಾವಾಗ ಮಾಡಲಾಗುವುದು?

ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ) ಹೊನ್ನಾಳಿ ತಾಲ್ಲೂಕಿನಲ್ಲಿ ರೈತ ಸಂಜೀವಿನಿ ವಿಮಾ ಯೋಜನೆಯಡಿಯಲ್ಲಿ 9 ಜನ ರೈತರಿಗೆ ಒಟ್ಟು ರೂ 2,06,000-00 ಗಳನ್ನು ಬಿಡುಗಡೆ ಮಾಡಲಾಗಿದೆ. (ಪಟ್ಟಿ ಲಗತ್ತಿಸಿದೆ)

ಆ) ಹಣ ಬಿಡುಗಡೆ ಕೋರಿ 2001-2002 ರಿಂದ ಈವರೆಗೂ 19 ಅರ್ಜಿಗಳು ಬಂದಿವೆ. 3 ಅರ್ಜಿಗಳು ಮಾತ್ರ ಬಾಕಿ ಉಳಿದಿದ್ದು ಇವುಗಳಿಗೆ ಹೊನ್ನಾಳಿ ಮಾರುಕಟ್ಟೆ ಸಮಿತಿಯಿಂದ ಮಾಹಿತಿಯನ್ನು ಕೇಳಲಾಗಿದೆ.

ಇ) ಇವರಿಗೆ ಹೊನ್ನಾಳಿ ಮಾರುಕಟ್ಟೆ ಸಮಿತಿಯಿಂದ ಕೋರಿದ ಮಾಹಿತಿ ಬಂದ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

512(202) ಶ್ರೀ ಶಕುಂತಲಾ ಟಿ. ಶೆಟ್ಟಿ (ಪುತ್ತೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಶಿಕ್ಷಣ ನೀಡುತ್ತಿರುವ ಬಿ.ಎಡ್., ಬಿ.ಪಿ.ಎಡ್., ಟಿಸಿಹೆಚ್ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಎಷ್ಟು ಜನ ಅಭ್ಯರ್ಥಿಗಳಿಗೆ ಪ್ರವೇಶಾವಕಾಶ ಲಭ್ಯವಿದೆ;

ಆ) ಅವುಗಳಲ್ಲಿ ಖಾಸಗೀ ಅನುದಾನಿತ ಹಾಗೂ ಸರ್ಕಾರಿ ಕಾಲೇಜುಗಳೆಷ್ಟು;

ಇ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಇಂತಹ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನೀಡಲಾಗಿದೆ.

ಈ) ಈ ಕಾಲೇಜುಗಳು ವಿದ್ಯಾರ್ಥಿಗಳ ಬೇಡಿಕೆಯ ಅನುಗುಣವಾಗಿದೆಯೇ; ಅಥವಾ ಸಂಖ್ಯೆಯಲ್ಲಿ ಹೆಚ್ಚಾಗಿವೆಯೇ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಅನುಬಂಧ-1ರಲ್ಲಿ ನೀಡಲಾಗಿದೆ.

ಆ) ಅನುಬಂಧ-2ರಲ್ಲಿ ನೀಡಲಾಗಿದೆ.

ಇ) ಕಳೆದ ಎರಡು ವರ್ಷಗಳಲ್ಲಿ ಎನ್‌ಸಿಟಿಇ-ಎಸ್‌ಆರ್‌ಸಿ ಅಂತಹ ಯಾವುದೇ ಸಂಸ್ಥೆಗಳಿಗೆ ಮಾನ್ಯತೆ ನೀಡಿಲ್ಲ.

ಈ) ಉದ್ಭವಿಸುವುದಿಲ್ಲ.

ಅನುಬಂಧ-1

| ಕಾಲೇಜು | ಕಾಲೇಜುಗಳ ಸಂಖ್ಯೆ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಎಡ್ | 68 | 6,800 |
| ಬಿ.ಪಿ.ಎಡ್ | 12 | 510 |
| ಡಿ.ಎಡ್ (ಟಿ.ಸಿ.ಹೆಚ್) | 131 | 7,800 |